**ಹಿಂಬರಹ ಸಂಖ್ಯೆ: ಡಿಟಿಇ 33 ಬಿಎಲ್‌ಡಿ 2015** **ದಿನಾಂಕ:22-02-2018.**

ಸರ್ಕಾರದ ಪತ್ರ ಸಂಖ್ಯೆ: ಇಡಿ 23 ಹೆಚ್‌ಪಿಯು 2018 ದಿನಾಂಕ:08-02-2018 ರ ಪತ್ರವನ್ನು ಮತ್ತು ದಿನಾಂಕ:05-02-2018 ರಂದು ಅಪರ ಮುಖ್ಯ ಕಾರ್ಯದರ್ಶಿ, ಮೂಲಭೂತ ಸೌಕರ್ಯ ಅಭಿವೃದ್ಧಿ ಸಮಿತಿ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಯ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಲಾಗಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001.

**ಇವರಿಗೆ:**

**ಪ್ರಿನ್ಸಿಪಾಲರು,**

ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳು.

**ಪ್ರತಿ:**

ಇ-ಆಡಳಿತ ವಿಭಾಗ - ಮಾಹಿತಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು.

C.No = 19037
PR No/775/22/2/18

<u>ಕರ್ನಾಟಕ ಸರ್ಕಾರ</u>

ಸಂಖ್ಯೆ.ಇಡಿ 23 ಹೆಚ್‌ಪಿಯು 2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು. ದಿ: 08/02/2018

**ಇವರಿಂದ,**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು.

**ಇವರಿಗೆ,**

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು – 560 001.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು – 560 001

ಮಾನ್ಯರೆ,

**ವಿಷಯ: ಅಪರ ಮುಖ್ಯ ಕಾರ್ಯದರ್ಶಿ, ಮೂಲಭೂತ ಸೌಕರ್ಯ ಅಭಿವೃದ್ಧಿ ಸಮಿತಿ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗೆ ಕೋರಿರುವ ಮಾಹಿತಿಯನ್ನು ನೇರವಾಗಿ ಸಲ್ಲಿಸುವ ಬಗ್ಗೆ**

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ: 05/02/2018ರಂದು ಅಪರ ಮುಖ್ಯ ಕಾರ್ಯದರ್ಶಿ, ಮೂಲಭೂತ ಸೌಕರ್ಯ ಅಭಿವೃದ್ಧಿ ಸಮಿತಿ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

8/2

(ಅಪರ್ಣಾ ಪಾವಟೆ)
ಆಂತರಿಕ ಆರ್ಥಿಕ ಸಲಹೆಗಾರರು ಮತ್ತು
ಸರ್ಕಾರದ ಉಪ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ

JD (Plan)/Bldg

Recd on 13/2/18

14/2

B-2076 14/2/18

Recd 22/2

19/2/18

ಸಂಖ್ಯೆ: ಅಮುಕಾ/೧೪ಎಸಿ/2018 C.no-2295/18 06/02/18 D:5/2/2018

**ಕರ್ನಾಟಕ ವಿಧಾನಸಭಾ ಚುನಾವಣೆ 2018ರ ಪೂರ್ವಭಾವಿಯಾಗಿ ದಿನಾಂಕ:5.02.2018ರಂದು ಅಪರ ಮುಖ್ಯಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಮೂಲಭೂತ ಸೌಕರ್ಯ ಅಭಿವೃದ್ಧಿ ಸಮಿತಿಯ ನಡವಳಿಗಳು.**

ಸಭೆಯಲ್ಲಿ ಹಾಜರಿದ್ದವರ ಸದಸ್ಯರ ಪಟ್ಟಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ.

1. ಅಪರ ಮುಖ್ಯ ಕಾರ್ಯದರ್ಶಿಗಳು ಸಭೆಗೆ ಆಗಮಿಸಿದ ಸದಸ್ಯರನ್ನು ಸ್ವಾಗತಿಸಿ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 60 ಎಸ್‌ಎಎಸ್ 2018 ದಿನಾಂಕ:31-1-2018ರಲ್ಲಿ ಕರ್ನಾಟಕ ವಿಧಾನಸಭಾ ಚುನಾವಣೆ 2018ರ ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ ಸಮಿತಿಯನ್ನು ರಚಿಸಲಾಗಿದ್ದು, ಮತಗಟ್ಟೆಯಲ್ಲಿ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಚರ್ಚಿಸಲಾಯಿತು. ಚರ್ಚೆಯ ನಂತರ ಈ ಕೆಳಕಂಡ ನಿರ್ಣಯಗಳನ್ನು ಸಮಿತಿಯು ತೆಗೆದುಕೊಂಡಿತು.

2. ರಾಜ್ಯದಲ್ಲಿನ ಸುಮಾರು 13,000 ಮತಗಟ್ಟೆಯಲ್ಲಿ ಕನಿಷ್ಠ ಮೂಲಭೂತ ಸೌಕರ್ಯಗಳಾದ, ವಿದ್ಯುಚ್ಛಕ್ತಿ, ದೈಹಿಕ ಅಂಗವಿಕಲರಿಗೆ ಇಳಿಜಾರು ವ್ಯವಸ್ಥೆ, ಶೌಚಾಲಯ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ಪೀಠೋಪಕರಣ ಮತ್ತು ಮತಗಟ್ಟೆಯಲ್ಲಿ ಕೆಲವು ದುರಸ್ತಿ ಕಾರ್ಯ ಕೈಗೊಳ್ಳಲು ಸುಮಾರು ರೂ.28.00 ಕೋಟಿಗಳ ಅವಶ್ಯಕತೆ ಇರುತ್ತದೆ. ಈ ಬಗ್ಗೆ ಇಲಾಖಾವಾರು ಅನುದಾನದ ವಿವರಗಳನ್ನು ಲಗತ್ತಿಸಿದೆ. ಈ ಪೈಕಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ರೂ.5.00 ಕೋಟಿಗಳ ಅವಶ್ಯಕತೆ ಇರುತ್ತದೆ.

3. ಸದರಿ ಕಾಮಗಾರಿಗಳನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಮೂಲಕ ನಿರ್ವಹಿಸಲು ಆಯಾ ಇಲಾಖೆಯ ಮುಖ್ಯಸ್ಥರು ಮುಂದಿನ ವರ್ಷದ ಆಯವ್ಯಯದಲ್ಲಿ ಅನುದಾನ ಒದಗಿಸುವಂತೆ ಕೋರಲು ನಿರ್ಣಯಿಸಲಾಯಿತು. ಹಾಗೂ ಸದರಿ ಅನುದಾನಕ್ಕೆ ಷರತ್ತಿನ ಮೇಲೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲು ತೀರ್ಮಾನಿಸಲಾಯಿತು.

4. ಈ ಬಗ್ಗೆ ದಿನಾಂಕ:6-2-2018ರಂದು ನಡೆಯಲಿರುವ ಜಿಲ್ಲಾಧಿಕಾರಿಗಳ ಮತ್ತು ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ವೀಡಿಯೋ ಕಾನ್ಫರೆನ್ಸ್‌ನಲ್ಲಿ ಮಾಹಿತಿ ನೀಡಿ ಸದರಿ ಕಾಮಗಾರಿಗಳನ್ನು ಫೆಬ್ರವರಿ ತಿಂಗಳ ಅಂತ್ಯದೊಳಗೆ ಪೂರೈಸಬೇಕೆಂದು ಸೂಚಿಸಲು ತೀರ್ಮಾನಿಸಲಾಯಿತು.

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

[signature] 5/2/18
(ಟಿ.ಎಂ. ವಿಜಯಭಾಸ್ಕರ್)
ಅಪರ ಮುಖ್ಯ ಕಾರ್ಯದರ್ಶಿ.

ಡಿ.ಎಸ್(ಯೋಜನೆ)

4/2

6/02/18